ಲಿಖಿತ ಮೂಲಕ ಉತ್ತರಿಸುವ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತನೆಯ ಅಧಿವೇಶನ
ಬುಧವಾರ, ದಿನಾಂಕ : 11 ನೇ ಮಾರ್ಚ್, 2020

ಚಾರಿತ್ರಿಕ ಹಿನ್ನೆಲೆಯ ಪ್ರಸಿದ್ಧ ದೇವಾಲಯಗಳ ಜೀರ್ಣೋದ್ಧಾರ ಕುರಿತು

ಶ್ರೀಹೆಚ್.ಎಂ.ರಮೇಶ್‌ಗೌಡ(ವಿಧಾನಸಭೆಯಿಂದಚುನಾಯಿತರಾದವರು) :-

636 (819) ಮಾನ್ಯ ಮುಜರಾಯಿ ಹಾಗೂ ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಧಾರ್ಮಿಕ ದತ್ತಿ ಇಲಾಖೆಯಡಿ ರಾಜ್ಯದ ವಿವಿಧ ಭಾಗಗಳಲ್ಲಿರುವ ಚಾರಿತ್ರಿಕ ಹಿನ್ನೆಲೆಯ ಪ್ರಸಿದ್ಧ ದೇವಾಲಯಗಳು ಶ್ರದ್ಧಾ ಕೇಂದ್ರಗಳ ಜೀರ್ಣೋದ್ಧಾರಕ್ಕಾಗಿ ಪ್ರಸಕ್ತ ಸಾಲಿನಲ್ಲಿ ಮಂಜೂರಾದ, ಬಿಡುಗಡೆಯಾದ ಹಾಗೂ ಬಾಕಿ ಉಳಿದಿರುವ ಅನುದಾನವೆಷ್ಟು; ಬಾಕಿ ಉಳಿಯಲು ಕಾರಣಗಳೇನು ; (ಆದೇಶದೊಂದಿಗೆ ವಿವರ ನೀಡುವುದು)

(ಆ) ರಾಜ್ಯದ ನಾನಾ ಭಾಗಗಳಲ್ಲಿರುವ ಶತಮಾನಗಳ ಇತಿಹಾಸವಿರುವ ಪ್ರಾಚೀನ ದೇವಾಲಯಗಳನ್ನು ಮುಜರಾಯಿ ಇಲಾಖೆ ಸ್ವಾಧೀನಪಡಿಸಿ ಧಾರ್ಮಿಕ ಪ್ರವಾಸೋದ್ಯಮ ಅಭಿವೃದ್ಧಿಪಡಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ; ಹಾಗಿದ್ದಲ್ಲಿ, ಯಾವ ಕಾಲಮಿತಿಯಲ್ಲಿ ಇದನ್ನು ಪೂರ್ಣಗೊಳಿಸಲಾಗುವುದು ; (ವಿವರ ನೀಡುವುದು)

(ಇ) ಮುಜರಾಯಿ ಇಲಾಖೆಯಡಿ ಬರುವ ರಾಜ್ಯದ ಪ್ರಸಿದ್ಧ ದೇವಾಲಯಗಳ ಕಳೆದೆರಡು ವರ್ಷಗಳ ಆದಾಯವೆಷ್ಟು? (ಜಿಲ್ಲಾವಾರು ದೇವಾಲಯಗಳ ಆದಾಯ, ಹುಂಡಿ ಸಂಗ್ರಹ, ಆನ್‌ಲೈನ್ ಸೇವೆ ಇತ್ಯಾದಿ ಆದಾಯದ ಮೂಲಗಳ ಸಂಪೂರ್ಣ ವಿವರ ನೀಡುವುದು)